**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿಸಿ ನಂ. 554/2023**

| | | | |
|---|---|---|---|
| **ಹೆಸರು** | **:** | **ಅನ್ವರ** | ಚಾ.ಸಾ. 5 |
| **ತಂದೆಯ ಹೆಸರು** | **:** | **ಮುಗ್ದುಮ** | ಪ್ರಾ.ಸಾ. 3 |
| **ವಯಸ್ಸು** | **:** | **34 ವರ್ಷ** | ದಿನಾಂಕಃ 25-09-2025 |
| **ಉದ್ಯೋಗ** | **:** | **ಚಾಲಕ** | |
| **ವಾಸಸ್ಥಳ** | **:** | **ವೋಲಕಪಳ್ಳಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಚಾಸಾ-14 ರವರು ನನಗೆ ಗೊತ್ತು. ನ್ಯಾಯಾಲಯದ ಮುಂದೆ ಇರುವ ಆರೋಪಿಗೆ ನಾನು ಈ ಮೊದಲು ನೋಡಿಲ್ಲ. ವಿಶ್ವನಾಥ ಮತ್ತು ಮಲ್ಲಿಕಾರ್ಜುನರವರು ನನಗೆ ಗೊತ್ತಿಲ್ಲ. ಚಾಸಾ-4ರವರು ನನಗೆ ಗೊತ್ತಿಲ್ಲ.

ಈಗ ನೋಡುತ್ತಿರುವ ದಾಖಲೆಯಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಯನ್ನು ನಿಪಿ-4 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ಈಗ 3-4 ವರ್ಷಗಳ ಹಿಂದೆ ಮಧ್ಯಾಹ್ನ 12-1 ಗಂಟೆ ಸುಮಾರಿಗೆ ಪೋಲಿಸ ಠಾಣೆಯಿಂದ ನನ್ನ ಟ್ರಾಕ್ಟರನ್ನು ತೆಗೆದುಕೊಳ್ಳಲು ಹೋದಾಗ ಪೋಲಿಸರು ಸಹಿ ಮಾಡು ಎಂದು ಹೇಳಿದ್ದಕ್ಕೆ ಸಹಿ ಮಾಡಿದ್ದೇನೆ. ನನ್ನ ಸಮಕ್ಷಮ ಯಾವುದೇ ವಸ್ತು ಜಪ್ತಿ ಮಾಡಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಹೇಳಿಕೆಗೆ ಈ ಸಾಕ್ಷಿ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ದಿನಾಂಕ 27-07-2023ರಂದು ಬೆಳಗ್ಗೆ 8.45 ರಿಂದ 9.45ರವರೆಗೆ ಪೋಲಿಸರು ನನ್ನ ಹಾಗೂ ಚಾಸಾ-4ರವರ ಸಮಕ್ಷಮ ಪೋಲಿಸ ಠಾಣೆಯಲ್ಲಿ 1ನೇ ಆರೋಪಿ, ವಿಶ್ವನಾಥ ಹಾಗೂ ಮಲ್ಲಿಕಾರ್ಜುನರವರಿಂದ ಒಟ್ಟು ರೂ. 5100/- ಜಪ್ತಿ ಮಾಡಿಕೊಂಡಿರುತ್ತಾರೆ ಎಂದರೆ ಸಾಕ್ಷಿ ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ಈ ರೀತಿ ಆರೋಪಿಯ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪೋಲಿಸರು ಪಂಚನಾಮೆ ಸಂಗತಿಗಳನ್ನು ನನಗೆ ಓದಿ ಹೇಳಿರುತ್ತಾರೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ SAS ವಕೀಲರಿಂದಃ** ಇಲ್ಲಾ .

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**
**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ .ದಂ. ಚಿಂಚೋಳಿ**